ವಿಜಯವಾಣಿ
ಕನ್ನಡಿಗರ ಧ್ವನಿ

**Friday 07th August 2020, Page No.04**

## UPSC: Achievement of RV College Students

### ಭಾರತೀಯ ಆಡಳಿತ ಸೇವೆಗೆ 6 ಮಂದಿ ಆಯ್ಕೆ | ಪ್ರಾಂಶುಪಾಲರಿಂದ ಅಭಿನಂದನೆ

# ಆರ್‌ವಿ ಕಾಲೇಜಿನ ವಿದ್ಯಾರ್ಥಿಗಳ ಸಾಧನೆ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಈ ಬಾರಿಯ ಯುಪಿಎಸ್‌ಸಿ ಪರೀಕ್ಷೆಯಲ್ಲಿ ಆರ್.ವಿ. ಇಂಜಿನಿಯರಿಂಗ್ ಕಾಲೇಜಿನಲ್ಲಿ ವ್ಯಾಸಂಗ ಮಾಡಿದ್ದ 5 ವಿದ್ಯಾರ್ಥಿಗಳು ಉತ್ತಮ ರ್‍ಯಾಂಕ್ ಪಡೆದು ಅಖಿಲ ಭಾರತೀಯ ಆಡಳಿತ ಸೇವೆಗಳಿಗೆ ಆಯ್ಕೆಯಾಗಿದ್ದಾರೆ.



ಸಚಿನ್ ಹಿರೇಮಠ-213, ಯಶಸ್ವಿನಿ-71, ಬಿ.ಆರ್. ವರುಣ್- 395, ಯತೀಶ್- 419 ಮತ್ತು ರಾಘವೇಂದ್ರ 536ನೇ ರ್‍ಯಾಂಕ್ ಪಡೆದಿದ್ದಾರೆ. ಈ ಎಲ್ಲ ಅಭ್ಯರ್ಥಿಗಳಿಗೆ **ಡಾ. ಕೆ.ಎನ್. ಸುಬ್ರಹ್ಮಣ್ಯ** ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್ ಕಾರ್ಯದರ್ಶಿ ಮತ್ತು ಪದಾಧಿಕಾರಿಗಳು ಅಭಿನಂದನೆ ಸಲ್ಲಿಸಿದ್ದಾರೆ.

ನಮ್ಮ ಕಾಲೇಜಿನಲ್ಲಿ ವ್ಯಾಸಂಗ ಮಾಡಿದ ಬಹಳಷ್ಟು ವಿದ್ಯಾರ್ಥಿಗಳು ಯುಪಿಎಸ್‌ಸಿನಲ್ಲಿ ಉತ್ತಮ ರ್‍ಯಾಂಕ್ ಗಳಿಸಿ ಐಎಎಸ್, ಐಪಿಎಸ್ ಆಗಿ ಸೇವೆ ಸಲ್ಲಿಸುತ್ತಿದ್ದಾರೆ.

### ಹೊಸ ಭಾಷೆ, ಸಂಸ್ಕೃತಿ ಬೆಳವಣಿಗೆ

**ಯುಪಿಎಸ್‌ಸಿ ಕನಸು ಕಾಣುವ ಅಭ್ಯರ್ಥಿಗಳಿಗೆ ನಮ್ಮ ಕಾಲೇಜು ಉತ್ತಮ ಶಿಕ್ಷಣ ಮತ್ತು ವಾತಾವರಣ ಸ್ಫೂರ್ತಿ ನೀಡುತ್ತದೆ. ಇಂಜಿನಿಯರಿಂಗ್‌ನಲ್ಲಿ ಉತ್ತಮವಾಗಿ ವ್ಯಾಸಂಗ ಮಾಡಿದವರು ಗಣಿತದ ವಿಷಯದಲ್ಲಿ ಹೆಚ್ಚು ನೈಪುಣ್ಯ ಹೊಂದಿರುತ್ತಾರೆ. ಇದು ಯುಪಿಎಸ್‌ಸಿ ಪರೀಕ್ಷೆಗೆ ಸಹಾಯವಾಗುತ್ತದೆ. ಹ್ಯೂಮಾನಿಟಿ ಕೋರ್ಸ್‌ನಲ್ಲಿ ವಿದ್ಯಾರ್ಥಿಗಳಿಗೆ ಸಂವಿಧಾನ, ಅರ್ಥಶಾಸ್ತ್ರ, ಪರಿಸರ ಅಧ್ಯಯನ ವಿಚಾರಗಳ ಬಗ್ಗೆ ಬೋಧಿಸುತ್ತೇವೆ. ಇದರಿಂದ ತಂತ್ರಜ್ಞಾನ ಮಾತ್ರವಲ್ಲ, ಇತರೆ ವಿಷಯಗಳ ಅರಿವು ವಿದ್ಯಾರ್ಥಿಗಳಿಗೆ ಬರುತ್ತದೆ. ದೇಶದ ಮೂಲೆ ಮೂಲೆಗಳಿಂದ ಬಂದು ಇಲ್ಲಿ ಓದುವುದರಿಂದ ವಿದ್ಯಾರ್ಥಿಗಳಲ್ಲಿ ಹೊಸ ಭಾಷೆ, ಸಂಸ್ಕೃತಿ ಬೆಳವಣಿಗೆಗೆ ಕಾರಣವಾಗಲಿದೆ. ಇದು ಯುಪಿಎಸ್‌ಸಿ ಸಂದರ್ಶನದಲ್ಲಿ ಸಹಾಯ ಮಾಡುತ್ತದೆ ಎಂದು ಡಾ. ಕೆ.ಎನ್. ಸುಬ್ರಹ್ಮಣ್ಯ ಹೇಳಿದರು.**

2019ನೇ ಬ್ಯಾಚ್‌ನಲ್ಲಿ 6 ವಿದ್ಯಾರ್ಥಿಗಳು ಯುಪಿಎಸ್‌ಸಿನಲ್ಲಿ ಆಯ್ಕೆಯಾಗಿರುವುದು ಸಂತೋಷದ ವಿಚಾರವಾಗಿದೆ ಎಂದು ಈ ಕಾಲೇಜಿನ ಪ್ರಾಂಶುಪಾಲ ಡಾ. ಕೆ.ಎನ್. ಸುಬ್ರಹ್ಮಣ್ಯ ತಿಳಿಸಿದರು.

**ಪರಿಹಾರ ಕಂಡುಕೊಳ್ಳಲು ಸಹಾಯ:** ಯುಪಿಎಸ್‌ಸಿನಲ್ಲಿ ಉತ್ತೀರ್ಣರಾಗುವವರ ಪೈಕಿ ಬಹುತೇಕರು ಗ್ರಾಮೀಣ ಭಾಗದವರಾಗಿದ್ದಾರೆ. ಇಂಜಿನಿಯರಿಂಗ್ ವಿದ್ಯಾರ್ಥಿಗಳು ಐಎಎಸ್ ಆದಲ್ಲಿ ಸಮಾಜದಲ್ಲಿರುವ ಸಮಸ್ಯೆಗಳಿಗೆ ಬೇಗ ಪರಿಹಾರ ಕಂಡುಕೊಳ್ಳಲು ಸಹಾಯವಾಗುತ್ತದೆ ಎಂದು ಸುಬ್ರಹ್ಮಣ್ಯ ಹೇಳಿದರು.

ಇಂಜಿನಿಯರಿಂಗ್‌ನಲ್ಲಿ ತಂತ್ರಜ್ಞಾನದ ಮೂಲಕ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವುದರ ಬಗ್ಗೆ ವಿದ್ಯಾರ್ಥಿಗಳಿಗೆ ತರಬೇತಿ ನೀಡಲಾಗಿರುತ್ತದೆ. ಇದು ಅವರಿಗೆ ಮುಂದೆ ಬಹಳ ಉಪಯುಕ್ತವಾಗಲಿದೆ. ಇದಕ್ಕೆ ಪೂರಕವಾಗಿ ನಮ್ಮಲ್ಲಿ ಸಾಕಷ್ಟು ಕ್ಲಬ್‌ಗಳಿವೆ. ಪ್ರತಿ ತಿಂಗಳು ನಮ್ಮಲ್ಲಿ ಒಬ್ಬ ಯುಪಿಎಸ್‌ಸಿ ಟಾಪರ್‌ಗಳನ್ನು ನಮ್ಮ ಕಾಲೇಜಿಗೆ ಆಹ್ವಾನಿಸಿ ವಿದ್ಯಾರ್ಥಿಗಳೊಂದಿಗೆ ಸಂವಾದ ಆಯೋಜನೆ ಮಾಡುತ್ತೇವೆ ಎಂದರು.